# ಮುಗಳೂರು ಗ್ರಾಮ ಪಂಚಾಯಿತಿ ಕಾರ್ಯಾಲಯ

ಮುಗಳೂರು ಗ್ರಾಮ, ಸರ್ಜಾಪುರ ಹೋಬಳಿ, ಆನೇಕಲ್ ತಾಲ್ಲೂಕು, ಬೆಂಗಳೂರು ನಗರ ಜಿಲ್ಲೆ – 562125

ಕ್ರ.ಸಂಖ್ಯೆ: ಗ್ರಾ.ಪಂ/20/2024-25

ದಿನಾಂಕ : 15/07/2024

## ನಿರಾಕ್ಷೇಪಣಾ ಪತ್ರ

ಬೆಂಗಳೂರು ನಗರಜಿಲ್ಲೆ, ಆನೇಕಲ್‌ತಾಲ್ಲೂಕು, ಸರ್ಜಾಪುರ ಹೋಬಳಿ, ಮುಗಳೂರು ಗ್ರಾಮ ಪಂಚಾಯಿತಿ ವ್ಯಾಪ್ತಿಯ ಮಹಲ್ ಚೌಡದೇನಹಳ್ಳಿ ಗ್ರಾಮದ ಸರ್ವೇ ನಂ 87/4 ರಲ್ಲಿ0 ಎಕರೆ 14 ಗುಂಟೆ ಜಮೀನು ಮಾನ್ಯ ಜಿಲ್ಲಾಧಿಕಾರಿಗಳವರ ಭೂ ಪರಿವರ್ತನೆ ಆದೇಶ ALN (A)(S): SR 160/2023-24 ದಿನಾಂಕ 26/03/2024 ರಂತೆ ವಾಸದ ಉದ್ದೇಶಕ್ಕಾಗಿ ಭೂ ಪರಿವರ್ತನೆಯಾಗಿರುತ್ತದೆ, ಮಹಲ್ ಚೌಡದೇನಹಳ್ಳಿ ಗ್ರಾಮದ ಸರ್ವೇ ನಂ 87/3ರಲ್ಲಿ 2 ಎಕರೆ 2.8 ಗುಂಟೆ ಜಮೀನು ಮಾನ್ಯ ಜಿಲ್ಲಾಧಿಕಾರಿಗಳವರ ಭೂ ಪರಿವರ್ತನೆ ಆದೇಶ ALN (A)(S): SR 97/2023-24 ದಿನಾಂಕ 21/12/2023 ರಂತೆ ವಾಸದ ಉದ್ದೇಶಕ್ಕಾಗಿ ಭೂ ಪರಿವರ್ತನೆಯಾಗಿರುತ್ತದೆ, ಮಹಲ್ ಚೌಡದೇನಹಳ್ಳಿ ಗ್ರಾಮದ ಸರ್ವೇ ನಂ 87/4ರಲ್ಲಿ 1 ಎಕರೆ 31 ಗುಂಟೆ ಜಮೀನು ಮಾನ್ಯ ಜಿಲ್ಲಾಧಿಕಾರಿಗಳವರ ಭೂ ಪರಿವರ್ತನೆ ಆದೇಶ ALN (A)(S): SR 161/2023-24 ದಿನಾಂಕ 26/03/2024 ರಂತೆ ವಾಣಿಜ್ಯ ಉದ್ದೇಶಕ್ಕಾಗಿ ಭೂ ಪರಿವರ್ತನೆಯಾಗಿರುತ್ತದೆ ಒಟ್ಟು 4 ಎಕರೆ 7.8 ಗುಂಟೆ ಜಮೀನಿನಲ್ಲಿ ಸದರಿ ಜಮೀನಿನಲ್ಲಿ **M/s MODERN PROJECTS** ರವರುವಸತಿ ಸಮುಚ್ಚಯ ನಿರ್ಮಿಸಲು ಉದ್ದೇಶಿಸಿರುತ್ತಾರೆ,

ಸದರಿಯವರು ಉದ್ದೇಶಿಸಿರುವ ವಸತಿ ಸಮುಚ್ಚಯ ಯೋಜನೆಯಲ್ಲಿ ಸದರಿಯವರು ಮೂಲಭೂತ ಸೌಕರ್ಯಗಳಾದ ರಸ್ತೆ, ನೀರು ಸರಬರಾಜು, ಒಳಚರಂಡಿ ವ್ಯವಸ್ಥೆಯನ್ನುಅಭಿವೃದ್ಧಿ ಪಡಿಸುವುದಕ್ಕೆ ನಮ್ಮಗ್ರಾಮ ಪಂಚಾಯತಿ ವತಿಯಿಂದ ಯಾವುದೇ ಅಕ್ಷೇಪಣೆ ಇರುವುದಿಲ್ಲ.

ಸಕ್ಷಮ ಪ್ರಾಧಿಕಾರದ ಅನುಮೋದಿತ ನಕ್ಷೆಯಂತೆ ಉದ್ದೇಶಿತ ವಸತಿ ಸಮುಚ್ಚಯ ಕಾಮಗಾರಿಗಳು ಪೂರ್ಣಗೊಂಡ ನಂತರ ಗ್ರಾಮ ಪಂಚಾಯತಿಗೆ ಕಟ್ಟಬೇಕಾದ ವಿವಿಧ ತೆರಿಗೆಗಳನ್ನು ಹಾಗೂ ಕುಡಿಯುವ ನೀರಿಗೆ ಸಂಬಂಧಪಟ್ಟಂತಹ ಶುಲ್ಕವನ್ನು ಸಂದಾಯ ಮಾಡಿದ ನಂತರ ಅವಶ್ಯವಿದಲ್ಲಿ ಈಗಿರುವ ನೀರಿನ ಮೂಲಗಳಿಂದ ಕುಡಿಯುವ ನೀರನ್ನು ಸರಬರಾಜು ಮಾಡಲಾಗುವುದೆಂದು ಈ ಮೂಲಕ ಧೃಡೀಕರಿಸುತ್ತೇವೆ. ಕುಡಿಯುವ ನೀರಿನ ಸಮಸ್ಯಗಳು ಉದ್ಭವಿಸಿದಲ್ಲಿ ಸರಬರಾಜಿನಲ್ಲಿ ವ್ಯತ್ಯಾಸ ಹಾಗೂ ಸಂಪೂರ್ಣ ಸ್ಥಗಿತಗೊಳಿಸಲಾಗುವುದೆಂದು ಕೂಡ ತಿಳಿಯತಕ್ಕದು ಹಾಗೂ ಸದರಿ ಜಮೀನಿಗೆ 40 ಅಡಿಗಳ ಸಾರ್ವಜನಿಕ ರಸ್ತೆ ಸಂಪರ್ಕವು ಇರುತ್ತದೆ.

ಈ ವಸತಿ ಸಮುಚ್ಚಯಕ್ಕೆ ಕುಡಿಯುವ ನೀರಿನ ಸಂಪರ್ಕ ನೀಡಲು ಯಾವುದೇ ಆಕ್ಷೇಪಣೆ ಇರುವುದಿಲ್ಲವೆಂದು ಈ ಮೂಲಕ ಸಂಬಂಧಪಟ್ಟವರಿಗೆ ನಿರಾಪೇಕ್ಷಣಾ ಪತ್ರವನ್ನು ನೀಡಲಾಗಿದೆ.

ಪಂಚಾಯ್ತಿ ಅಭಿವೃದ್ಧಿ ಅಧಿಕಾರಿ
ಮುಗಳೂರು ಗ್ರಾಮ ಪಂಚಾಯಿತಿ
ಆನೇಕಲ್ ತಾಲ್ಲೂಕು